**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ರಾಯಚೂರು ಜಿಲ್ಲೆ, ರಾಯಚೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಮಸ್ಯಾತ್ಮಕ ಗ್ರಾಮೀಣ ಜನವಸತಿ / ಗ್ರಾಮಗಳಲ್ಲಿ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:**
1. ಜನಪ್ರತಿನಿಧಿಗಳು / ಜಿಲ್ಲಾ ಪಂಚಾಯತಿಗಳಿಂದ ಸ್ವೀಕೃತಿಯಾಗಿರುವ ಹೆಚ್ಚುವರಿ ಅನುದಾನ ಬೇಡಿಕೆಯ ಪ್ರಸ್ತಾವನೆಗಳು.
2. ಮಾನ್ಯ ಮುಖ್ಯಮಂತ್ರಿರವರು ಕಡತದ ಸಂಖ್ಯೆ:ಗ್ರಾಅಪ/459/ಗ್ರಾಕುನಿವೈವಿಂ/2016ರಲ್ಲಿ ಆದೇಶಿಸಿರುವಂತೆ.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 35 ಗ್ರಾನೀಸ(4) 2015, ದಿನಾಂಕ:07.03.2015.
4. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 459 ಗ್ರಾಕುನೀನೈಇ 2016, ದಿನಾಂಕ:22.11.2016.

—

**ಪೀಠಿಕೆ:**

ಪ್ರಸ್ತುತ, ರಾಜ್ಯದಲ್ಲಿ ತೀವ್ರ ಬರಗಾಲವಿರುವುದರಿಂದ ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಿರುವಂತಹ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸುವ ಸಲುವಾಗಿ ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡಲು ಮೇಲೆ ಓದಲಾದ (4)ರ ಸರ್ಕಾರದ ಆದೇಶದಲ್ಲಿ ರಾಜ್ಯದ 139 ಬರಪೀಡಿತ ತಾಲ್ಲೂಕುಗಳನ್ನೊಳಗೊಂಡತೆ, 154 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಿಗೆ ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ರೂ.60.00ಲಕ್ಷಗಳಂತೆ ಮತ್ತು ಬರಪೀಡಿತ ಪ್ರದೇಶವೆಂದು ಘೋಷಣೆಯಾಗದ ತಾಲ್ಲೂಕುಗಳಲ್ಲಿಯೂ ಕುಡಿಯುವ ನೀರಿನ ಅಭಾವವಿರುವುದರಿಂದ ಉಳಿದ 35 ಗ್ರಾಮೀಣ ವಿಧಾನಸಭಾ ಕ್ಷೇತ್ರಗಳಿಗೆ, ಪ್ರತಿ ಗ್ರಾಮೀಣ ವಿಧಾನಸಭಾ ಕ್ಷೇತ್ರಕ್ಕೆ ರೂ.40.00ಲಕ್ಷಗಳಂತೆ, ಒಟ್ಟು **ರೂ.106.40ಕೋಟಿ** ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ. ಪ್ರಸ್ತುತ ರಾಯಚೂರು ಜಿಲ್ಲೆ, ರಾಯಚೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಮಸ್ಯಾತ್ಮಕ ಗ್ರಾಮೀಣ ಜನವಸತಿ / ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಅಗತ್ಯವಿರುವ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡಬೇಕಾಗಿದೆ. ಆದ್ದರಿಂದ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಗ್ರಾನೀಸ(4)2017 ಬೆಂಗಳೂರು, ದಿನಾಂಕ:05.01.2017.**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ **NRDWP** ಮಾರ್ಗಸೂಚಿಗಳನ್ವಯ ರಾಜ್ಯ ವಲಯದ **MNP (C&Q)** ಘಟಕದಡಿ **ರೂ.40.00ಲಕ್ಷ (ನಲವತ್ತು ಲಕ್ಷ ರೂಪಾಯಿಗಳು ಮಾತ್ರ)**ಗಳನ್ನು ರಾಯಚೂರು ಜಿಲ್ಲೆ, ರಾಯಚೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಸಮಸ್ಯಾತ್ಮಕ ಗ್ರಾಮೀಣ ಜನವಸತಿ / ಗ್ರಾಮಗಳಲ್ಲಿ ತುರ್ತಾಗಿ ಕುಡಿಯುವ ನೀರಿನ ಸೌಲಭ್ಯ ಕಲ್ಪಿಸಲು ಅಗತ್ಯವಿರುವ ತುರ್ತು ಕುಡಿಯುವ ನೀರಿನ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಹೆಚ್ಚುವರಿ / ವಿಶೇಷ ಅನುದಾನ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವು ಕೆಳಕಂಡ ನಿಬಂಧನೆಗೊಳಪಟ್ಟಿರುತ್ತದೆ:

I. ಮೇಲೆ (3)ರಲ್ಲಿ ಓದಲಾದ ಸರ್ಕಾರದ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ವಯ ಅನುಮೋದಿಸಲ್ಪಟ್ಟ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸಬೇಕು.

II. ಎಲ್ಲಿ ನೈಜವಾಗಿ ಕುಡಿಯುವ ನೀರಿನ ಸಮಸ್ಯೆಯಿದೆಯೋ ಅಂತಹ ಕಡೆಗಳಲ್ಲಿ ಮಾತ್ರ ಅಗತ್ಯ ಪುನಃಶ್ಚೇತನ (ಅಂದರೆ – ಕೊಳವೆ ಬಾವಿಗಳನ್ನು ಕೊರೆಯಿಸುವುದು, ಸ್ವಚ್ಛಗೊಳಿಸುವುದು, ಹೈಡ್ರೋಫ್ರಾಕ್ಚರಿಂಗ್‌ಗೊಳಿಸುವುದು, ಪಂಪ್ ಮೋಟಾರ್ ಅಳವಡಿಸುವುದು, ಪೈಪ್‌ಲೈನ್ ವಿಸ್ತರಣೆ)ದಂತಹ ಸಣ್ಣ ಪ್ರಮಾಣದ ಕಾಮಗಾರಿಗಳನ್ನು ಮಾತ್ರ ಅನುಷ್ಠಾನಗೊಳಿಸತಕ್ಕದ್ದು, ಹಾಗೂ ಖಾಸಗಿ ಬೋರ್‌ವೆಲ್‌ಗಳ ಸೇವೆ ಪಡೆಯುವಂತಹ ಕ್ರಮಗಳನ್ನು ಕೈಗೊಳ್ಳತಕ್ಕದ್ದು.

III. ತೀವ್ರ ಅನಿವಾರ್ಯವಿದ್ದಲ್ಲಿ ಮಾತ್ರ ಭೂ ವಿಜ್ಞಾನಿಗಳ ಸಲಹೆ ಮೇರೆಗೆ **ಹೊಸ ಬೋರ್‌ವೆಲ್‌ಗಳನ್ನು ಕೊರೆಸಿ**, ಸದರಿ ಬೋರ್‌ವೆಲ್‌ಗಳು ಸಾರ್ವಜನಿಕ ಉಪಯೋಗಕ್ಕೆ ಲಭ್ಯವಾಗುವಂತೆ ನೋಡಿಕೊಳ್ಳತಕ್ಕದ್ದು.

IV. ಹೊಸ ಕೊಳವೆ ಬಾವಿಗಳನ್ನು ಕೊರೆಯುವ ಮುನ್ನ ಅದರ ಸ್ಥಳ ಮತ್ತು ಗುರುತಿಗಾಗಿ **GPS System** ಮುಖೇನ ಅಧಿಕೃತ ದಾಖಲೆ ಮಾಡುವುದರ ಜೊತೆಗೆ, ಅದರ ಛಾಯಾ ಚಿತ್ರವನ್ನು ಕಾಮಗಾರಿಗೆ ಮುನ್ನ ಹಾಗೂ ನಂತರ ತೆಗೆದು ಗಾಂಧಿ ಸಾಕ್ಷಿಕಾಯಕದಲ್ಲಿ ದಾಖಲಿಸತಕ್ಕದ್ದು. ಸಂಬಂಧಪಟ್ಟ ಸ್ಥಳೀಯ ಹಿರಿಯ ಅಧಿಕಾರಿ ಈ ಪ್ರಕ್ರಿಯೆಯನ್ನು ಧೃಡೀಕರಿಸತಕ್ಕದ್ದು.

V. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿರುವ ಟಾಸ್ಕ್‌ಫೋರ್ಸ್ ಸಮಿತಿಗಳ ಶಿಫಾರಸ್ಸಿನನ್ವಯ ವಿನಿಯೋಗಿಸತಕ್ಕದ್ದು ಹಾಗೂ ಹೊಸ ಬೋರ್‌ವೆಲ್ ಮತ್ತು ತುರ್ತು ಮನಃಶ್ಚೇತನ ಕಾಮಗಾರಿಗಳಿಗೆ ವಿನಿಯೋಗಿಸತಕ್ಕದ್ದು.

3. ಅನುಷ್ಠಾನಗೊಳಿಸಿರುವ ಕಾಮಗಾರಿಗಳ ವಿವರಗಳನ್ನು ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮಾಹಿತಿಗಾಗಿ ಕಳುಹಿಸುವುದು. **ಜಿಲ್ಲಾ ಪಂಚಾಯತ್ ಯಾವುದೇ ಕಾರಣಕ್ಕೂ ಈ ಆದೇಶದಲ್ಲಿ ಹೇಳಲಾದ ಕಾಮಗಾರಿಗಳು ಇತರೆ ಯಾವುದೇ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು.** ಕಾಮಗಾರಿಗಳ ಅನುಷ್ಠಾನಕ್ಕೆ ಮುನ್ನ ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಅನುಮೋದನೆ ಪಡೆದುಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಆಯುಕ್ತರು, **ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ (RDWSD)**ರವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆಯಿಂದ ಡ್ರಾ ಮಾಡಿ ಕೇಂದ್ರ ಸರ್ಕಾರಕ್ಕೆ ಘೋಷಿಸಿರುವ ಸಿಂಡಿಕೇಟ್ ಬ್ಯಾಂಕ್‌ನ **SB ಖಾತೆ ಸಂಖ್ಯೆ:04462010091577**ಗೆ ರಾಷ್ಟ್ರೀಯ ಗ್ರಾಮೀಣ ಕುಡಿಯುವ ನೀರಿನ ಯೋಜನೆ **(NRDWP)**ಯಡಿ ರಾಜ್ಯದ ಪಾಲಾಗಿ ಜಮೆ ಮಾಡಬೇಕು.

5. ಈ ಆದೇಶದಲ್ಲಿ ಬಿಡುಗಡೆಯಾದ ರಾಜ್ಯವಲಯದ ಅನುದಾನವನ್ನು **ಲೆಕ್ಕಶೀರ್ಷಿಕೆ:2215-01-102-9-08-132**ರಡಿ ಗಣನೆಗೆ ತೆಗೆದುಕೊಂಡು, **RTGS** ಮುಖೇನ ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್ **(SWSM)** ಬ್ಯಾಂಕ್ ಖಾತೆ ಮುಖೇನ ವಿನಿಯೋಗಿಸತಕ್ಕದ್ದು. **ಸಿಂಡಿಕೇಟ್ ಬ್ಯಾಂಕ್ ಮೂಲ ಖಾತೆ ಸಂಖ್ಯೆ: 04462010091577** ಮುಖೇನ ರಾಯಚೂರು ಜಿಲ್ಲಾ ಪಂಚಾಯತ್ ಕಳುಹಿಸುವ ಬಿಲ್‌ಗಳನ್ನು ಮಾನ್ಯ ಮಾಡತಕ್ಕದ್ದು. ಸದರಿ **ರೂ.40.00ಲಕ್ಷ (ನಲವತ್ತು ಲಕ್ಷ ರೂಪಾಯಿಗಳು ಮಾತ್ರ)**ಗಳನ್ನು ಅನುದಾನ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಗಳನ್ನು ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ **(CE/RDWSD)** ಹಾಗೂ ರಾಯಚೂರು ಜಿಲ್ಲಾ ಪಂಚಾಯತ್ **IMIS**ನಡಿ ಹಾಗೂ **ಗಾಂಧಿ ಸಾಕ್ಷಿ ಕಾಯಕದಲ್ಲಿ** ದಾಖಲಿಸತಕ್ಕದ್ದು.

6. ಸರ್ಕಾರದ ಸುತ್ತೋಲೆ ಸಂಖ್ಯೆ:ಗ್ರಾಅಪ 117 ಗ್ರಾನೀಸ(4) 2011 ದಿ:15.10.2011ರನ್ವಯ ಅಧೀಕ್ಷಕ ಅಭಿಯಂತರರು, **ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ** (RDWSD) ವೃತ್ತ ಕಛೇರಿ ಇವರುಗಳು ಈ ಆದೇಶದಡಿ ಅನುಷ್ಠಾನಗೊಳಿಸುವ ಕಾಮಗಾರಿಗಳಿಗೆ ಸಂಬಂಧಿಸಿದಂತೆ ಪರಿವೀಕ್ಷಣೆ ಮಾಡಿ, ಸರ್ಕಾರಕ್ಕೆ ವಾಸ್ತವಿಕ ಚಿತ್ರಣ ನೀಡತಕ್ಕದ್ದು.

7. ಈ ಆದೇಶವನ್ನು ಆರ್ಥಿಕ ಇಲಾಖೆಯ ಅ.ಟಿ ಸಂಖ್ಯೆ:ಎಫ್‌ಡಿ 475 ವೆಚ್ಚ-6/2016, ದಿನಾಂಕ:22.11.2016ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.

3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ,ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ / ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ / ವಿಕಾಸಸೌಧ ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
9. ವಿಶೇಷಾಧಿಕಾರಿ (ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಬೆಂಗಳೂರು-09
10. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, ಕಾವೇರಿಭವನ, ಬೆಂಗಳೂರು-09.
12. ಅಧ್ಯಕ್ಷರು, ರಾಯಚೂರು ಜಿಲ್ಲಾ ಪಂಚಾಯತ್.
13. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು, ರಾಯಚೂರು ಜಿಲ್ಲಾ ಪಂಚಾಯತ್.
14. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, ಕಲಬುರಗಿ.
15. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಯಚೂರು.
16. ಕಾರ್ಯನಿರ್ವಾಹಕ ಅಧಿಕಾರಿಗಳು. ತಾಲ್ಲೂಕು ಪಂಚಾಯಿತಿ, ರಾಯಚೂರು.
17. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)ಇವರ ಆಪ್ತ ಕಾರ್ಯದರ್ಶಿಗಳು.
18. ಆಯುಕ್ತರು, RDWSD ಮತ್ತು ಪದನಿಮಿತ್ತ ಸರ್ಕಾರದ ಕಾರ್ಯದರ್ಶಿ / ಆಂತರಿಕ ಆರ್ಥಿಕ ಸಲಹೆಗಾರರು / ಮುಖ್ಯ ಲೆಕ್ಕಾಧಿಕಾರಿಗಳು ಇವರುಗಳ ಆಪ್ತ ಸಹಾಯಕರು.
19. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್‌ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
20. ಉಪ ನಿರ್ದೇಶಕರು, Network Management Center (TNMC), ನಂ.49, ಖನಿಜ ಭವನ, ರೇಸ್ ಕೋರ್ಸ ರಸ್ತೆ, ಬೆಂಗಳೂರು.
21. ಜಿಲ್ಲಾ ಖಜಾನಾಧಿಕಾರಿಗಳು, ರಾಯಚೂರು ಜಿಲ್ಲೆ.
22. **ಮ್ಯಾನೇಜರ್, ಸಿಂಡಿಕೇಟ್ ಬ್ಯಾಂಕ್, BWSSB ಬ್ರ್ಯಾಂಚ್, ರಾಜದೂತ್ ಕಾಂಪ್ಲೆಕ್ಸ್, ಅವೆನ್ಯೂ ರಸ್ತೆ, ಬೆಂಗಳೂರು.**
23. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ" ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
24. ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಗ್ರಾ.ಕು.ನೀ ಮತ್ತು ನೈರ್ಮಲ್ಯ ಉಪ ವಿಭಾಗ ರಾಯಚೂರು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
27. ಗ್ರಾಅಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ (10 ಪ್ರತಿಗಳು).
28. ಶಾಖಾ ರಕ್ಷಾ ಕಡತಃ ಹೆಚ್ಚುವರಿ ಪ್ರತಿಗಳು.